Akashvani: Bangalore
National Bulletin In Kannada
19.06.2026: 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

19.06.2026: 7.35AM

ಮುಖ್ಯಾಂಶಗಳು :

1. ಮಧ್ಯಪ್ರದೇಶದ ಓಂಕಾರೇಶ್ವರದಲ್ಲಿಂದು ನಡೆಯಲಿರುವ ಅಂತಾರಾಷ್ಟ್ರೀಯ ಸಿಕಲ್ ಸೆಲ್ ದಿನಾಚರಣೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ
2. ಪ್ರಧಾನಮಂತ್ರಿ ವಿಕಸಿತ ಭಾರತ್ ಉದ್ಯೋಗ ಯೋಜನೆಯಡಿ ಇಂದು ಪ್ರಧಾನಿ ಅವರಿಂದ ಪ್ರೋತ್ಸಾಹಧನ ವಿತರಣೆ
3. ಭಾರತ ನಾವೀನ್ಯತೆ ಮತ್ತು ತಂತ್ರಜ್ಞಾನದ ಜಾಗತಿಕ ಕೇಂದ್ರ: ಪ್ರಧಾನಿ ನರೇಂದ್ರ ಮೋದಿ
4. ನೀಟ್-ಯುಜಿ ಮರುಪರೀಕ್ಷಾ ಸಿದ್ಧತೆಗಳ ಕುರಿತು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಪರಿಶೀಲನಾ ಸಭೆ
5. ಎಫ್ಐಎಚ್ ವುಮೆನ್ಸ್ ನೇಷನ್ ಕಪ್: ಉರುಗ್ವೆಯನ್ನು ೩-೨ ಅಂತರದಿಂದ ಪರಾಭವಗೊಳಿಸಿದ ಭಾರತಕ್ಕೆ 'ಎ' ಗುಂಪಿನಲ್ಲಿ ಅಗ್ರಸ್ಥಾನ

*********

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಮಧ್ಯಪ್ರದೇಶದ ಓಂಕಾರೇಶ್ವರದಲ್ಲಿ ಅಂತಾರಾಷ್ಟ್ರೀಯ ಸಿಕಲ್ ಸೆಲ್ ದಿನದ ಅಂಗವಾಗಿ ನಡೆಯುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ನಂತರ, ರಾಷ್ಟ್ರಪತಿ ಅವರು ಒಡಿಶಾದ ರಾಯ್‌ರಂಗಪುರಕ್ಕೆ ಭೇಟಿ ನೀಡಲಿದ್ದು, ಹಲವು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ಇವುಗಳಲ್ಲಿ ಏಮ್ಸ್ ಭುವನೇಶ್ವರ ಆಯೋಜಿಸಿರುವ ವೈದ್ಯಕೀಯ ಶಿಬಿರ, ಗಣಿಗಾರಿಕೆ ಪೀಡಿತ ಹಳ್ಳಿಗಳಿಗೆ ಬೃಹತ್ ಗ್ರಾಮೀಣ ನೀರು ಸರಬರಾಜು ಯೋಜನೆ, ಬ್ರಹ್ಮ ಕುಮಾರಿಯರ ಮಾತೃಶಕ್ತಿ ಭವನ ಮತ್ತು ವಿಶೇಷ ಸರ್ಕ್ಯೂಟ್ ಹೌಸ್ ಸೇರಿವೆ.

*********

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಹಿನ್ನೆಲೆ ಲೇಹ್‌ನಲ್ಲಿ ಇಂದು ನಡೆಯಲಿರುವ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಸಿ.ಪಿ ರಾಧಾಕೃಷ್ಣನ್ ಭಾಗವಹಿಸಲಿದ್ದಾರೆ. ಲಡಾಖ್‌ನಲ್ಲಿ ಮೂರು ದಿನಗಳ ಪ್ರವಾಸದಲ್ಲಿರುವ ಅವರು ಲೇಹ್‌ನಲ್ಲಿ ನಡೆಯುವ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ.  ಉಪರಾಷ್ಟ್ರಪತಿ ಅವರು ಈ ತಿಂಗಳ ೨೧ ರವರೆಗೆ ಕೇಂದ್ರಾಡಳಿತ ಪ್ರದೇಶದಲ್ಲಿರಲಿದ್ದು, ಇದು ಲಡಾಖಾಗೆ ಅವರ ಮೊದಲ ಅಧಿಕೃತ ಭೇಟಿಯಾಗಿದೆ. ಈ ಸಮಯದಲ್ಲಿ, ಉಪರಾಷ್ಟ್ರಪತಿಗಳು ಜೂನ್ ೨೦ ರಂದು ಲುಕುಂಗ್ ಗ್ರಾಮಕ್ಕೆ ಪ್ರಯಾಣಿಸಲಿದ್ದಾರೆ, ಅಲ್ಲಿ ಅವರು ಸ್ಥಳೀಯ ಸ್ವಸಹಾಯ ಗುಂಪುಗಳೊಂದಿಗೆ ಸಂವಾದ ನಡೆಸಲಿದ್ದಾರೆ. ಅವರು ವೈಬ್ರೆಂಟ್ ವಿಲೇಜಸ್ ಕಾರ್ಯಕ್ರಮದ ಅಡಿಯಲ್ಲಿ ಗಡಿ ಪ್ರದೇಶದಲ್ಲಿ ಕೈಗೊಳ್ಳಲಾಗುತ್ತಿರುವ ಅಭಿವೃದ್ಧಿ ಉಪಕ್ರಮಗಳನ್ನು ವೀಕ್ಷಿಸಲಿದ್ದು, ನಂತರ, ಉಪರಾಷ್ಟ್ರಪತಿಗಳು ಯುದ್ಧ ಸ್ಮಾರಕದಲ್ಲಿ ಗೌರವ ಸಲ್ಲಿಸಲಿದ್ದಾರೆ. ಜೂನ್ ೨೧ ರಂದು,  ರಾಧಾಕೃಷ್ಣನ್ ಅವರು ಲೇಹ್‌ನಲ್ಲಿ ನಡೆಯುವ ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಯುವಕರು, ಸಶಸ್ತ್ರ ಪಡೆಗಳ ಸಿಬ್ಬಂದಿ ಮತ್ತು ವಿವಿಧ ಸಂಸ್ಥೆಗಳ ಸದಸ್ಯರು ಯೋಗದ ಮೂಲಕ ಸಮಗ್ರ ಆರೋಗ್ಯ ಮತ್ತು ಯೋಗಕ್ಷೇಮದ ಸಂದೇಶವನ್ನು ಸಾರಲು ಭಾಗವಹಿಸಲಿದ್ದಾರೆ.

*********

ಪ್ರಧಾನಮಂತ್ರಿ ವಿಕಸಿತ ಭಾರತ್ ಉದ್ಯೋಗ ಯೋಜನೆ ಅಡಿಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ನವದೆಹಲಿಯಲ್ಲಿ ೨ ಸಾವಿರ ೪೦೦ ಕೋಟಿ ರೂಪಾಯಿ ಪ್ರೋತ್ಸಾಹಧನವನ್ನು ವಿತರಿಸಲಿದ್ದಾರೆ. ಈ ಯೋಜನೆ ಕುರಿತು ನವದೆಹಲಿಯಲ್ಲಿ ಸುದ್ದಿಗಾರರಿಗೆ ಮಾಹಿತಿ ನೀಡಿದ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವ ಡಾ. ಮನ್ಸುಖ್ ಮಾಂಡವೀಯ, ಕಳೆದ ವರ್ಷದ ಆಗಸ್ಟ್‌ನಿಂದ ಇಲ್ಲಿಯವರೆಗೆ ೬೩ ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳನ್ನು ಪಿಎಂ-ವಿಬಿಆರ್‌ವೈ ಯೋಜನೆಯಡಿ ಔಪಚಾರಿಕ ಉದ್ಯೋಗ ವಲಯಕ್ಕೆ ಸೇರ್ಪಡೆಗೊಳಿಸಲಾಗಿದೆ. ಇವರಲ್ಲಿ ಸುಮಾರು ೩೦ ಪ್ರತಿಶತ ಮಹಿಳೆಯರಾಗಿದ್ದಾರೆ ಎಂದು ತಿಳಿಸಿದರು. ಈ ಯೋಜನೆಯಡಿ ಪ್ರೋತ್ಸಾಹಧನ ಪಡೆದಿರುವ ಸಂಸ್ಥೆಗಳಲ್ಲಿ ೮೦ ಪ್ರತಿಶತಕ್ಕೂ ಹೆಚ್ಚು ಸಂಸ್ಥೆಗಳು, ೨೫ಕ್ಕಿಂತ ಕಡಿಮೆ ಕಾರ್ಮಿಕರನ್ನು ಹೊಂದಿರುವ ಸಣ್ಣ ಉದ್ಯಮಗಳಾಗಿವೆ. ಮೊದಲ ಸರ್ಕಾರಿ

ಉದ್ಯೋಗವನ್ನು ಪಡೆದ ಯುವಜನರಿಗೆ ೧೫ ಸಾವಿರ ರೂಪಾಯಿವರೆಗೆ ಪ್ರೋತ್ಸಾಹಧನವನ್ನು ಎರಡು ಕಂತುಗಳಲ್ಲಿ ನೀಡಲಾಗುವುದು ಎಂದು ಸಚಿವರು ಹೇಳಿದರು. ಈ ಕಾರ್ಯಕ್ರಮದ ವೇಳೆ ೧೫ ಲಕ್ಷಕ್ಕೂ ಹೆಚ್ಚು ಫಲಾನುಭವಿಗಳ ಖಾತೆಗಳಿಗೆ ನೇರ ಹಣ ವರ್ಗಾವಣೆ ಮೂಲಕ ಪ್ರೋತ್ಸಾಹಧನ ಜಮಾ ಮಾಡಲಾಗುವುದು ಎಂದು ಸಚಿವ ಮನ್ಸುಖ್ ಮಾಂಡವೀಯ ತಿಳಿಸಿದರು.

*********

ಪ್ಯಾರಿಸ್‌ನಲ್ಲಿ ನಡೆದ ವಿವಾಟೆಕ್ ೨೦೨೪ರಲ್ಲಿ ಭಾರತವನ್ನು ನಾವೀನ್ಯತೆ ಮತ್ತು ತಂತ್ರಜ್ಞಾನದ ಜಾಗತಿಕ ಕೇಂದ್ರವಾಗಿ ಪ್ರಧಾನಿ ನರೇಂದ್ರ ಮೋದಿ ಪ್ರಸ್ತುತಪಡಿಸಿದ್ದಾರೆ. ಪ್ಯಾರಿಸ್‌ನಲ್ಲಿ ನಡೆದ ವಿವಾಟೆಕ್ ೨೦೨೪ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ಭಾರತವನ್ನು ನಾವೀನ್ಯತೆ ಮತ್ತು ತಂತ್ರಜ್ಞಾನದ ಜಾಗತಿಕ ಕೇಂದ್ರವಾಗಿ ಬಿಂಬಿಸಿದ್ದಾರೆ. ಕಳೆದ ದಶಕದಲ್ಲಿ ಭಾರತವು ತಂತ್ರಜ್ಞಾನದಿಂದ ನಡೆಸಲ್ಪಡುವ ಪರಿವರ್ತನೆಯ ಮೂಲಕ ಸಾಗುತ್ತಿದೆ. ಭಾರತವು ಆರ್ಥಿಕ ಸೇರ್ಪಡೆ, ಶಿಕ್ಷಣ, ಟೆಲಿಮೆಡಿಸಿನ್, ಕೃಷಿ ಮತ್ತು ಇನ್ನೂ ಇತರ ಕ್ಷೇತ್ರಗಳಲ್ಲಿ ತಂತ್ರಜ್ಞಾನವನ್ನು ಬೃಹತ್ ಪ್ರಮಾಣದಲ್ಲಿ ಬಳಸುತ್ತಿದೆ ಎಂದು ಅವರು ಹೇಳಿದರು. ಭಾರತವು ವಿಶ್ವದ ಅತಿದೊಡ್ಡ ಡಿಜಿಟಲ್ ಗುರುತಿನ ವ್ಯವಸ್ಥೆ ಮತ್ತು ವಿಶ್ವದ ಅತಿದೊಡ್ಡ ಡಿಜಿಟಲ್ ಪಾವತಿ ವೇದಿಕೆಯನ್ನು ರಚಿಸಿದೆ. ತಂತ್ರಜ್ಞಾನವು ಪ್ರಜಾಪ್ರಭುತ್ವೀಕರಣಗೊಂಡಾಗ ಮಾತ್ರ ಪ್ರಗತಿಗೆ ಕಾರಣವಾಗಬಹುದು. ಈ ಅಸ್ತವ್ಯಸ್ತತೆಯ ಯುಗದಲ್ಲಿ ತಂತ್ರಜ್ಞಾನವು ಎಲ್ಲರಿಗೂ ತಲುಪಿಸಬೇಕು ಎಂದು ಭಾರತ ನಂಬುತ್ತದೆ. ಜಾಗತಿಕ ನಾವೀನ್ಯಕಾರರು ಭಾರತದೊಂದಿಗೆ ಕೆಲಸ ಮಾಡುವ ಮೂಲಕ ಎಲ್ಲರಿಗೂ ಸೇವೆ ತಲುಪಿಸಬೇಕೆಂದು ಅವರು ಒತ್ತಾಯಿಸಿದರು. ಎರಡೂ ದೇಶಗಳ ನಡುವಿನ ಆರ್ಥಿಕ ಮತ್ತು ತಾಂತ್ರಿಕ ಸಹಕಾರವನ್ನು ಗಾಢವಾಗಿಸಲು ಅವರು ಪ್ರಮುಖ ಫ್ರೆಂಚ್ ವ್ಯಾಪಾರ ನಾಯಕರೊಂದಿಗೆ ಸಭೆಗಳನ್ನು ನಡೆಸಿದರು. ಹಣಕಾಸು, ಶಿಕ್ಷಣ, ಆರೋಗ್ಯ ರಕ್ಷಣೆ ಮತ್ತು ಕೃಷಿಯಂತಹ ಕ್ಷೇತ್ರಗಳಲ್ಲಿ ಭಾರತದ ತ್ವರಿತ ಡಿಜಿಟಲ್ ರೂಪಾಂತರ ಮಹತ್ತರ ಪ್ರಭಾವ ಬೀರಿದೆ. ಯುಪಿಐ ಈಗ ವಿಶ್ವದ ನೈಜ-ಸಮಯದ ಡಿಜಿಟಲ್ ವಹಿವಾಟುಗಳಲ್ಲಿ ಅರ್ಧದಷ್ಟು ಪಾಲನ್ನು ಹೊಂದಿದ್ದು, ಫ್ರಾನ್ಸ್‌ನಲ್ಲಿಯೂ ಲಭ್ಯವಿದೆ ಎಂದು ತಿಳಿಸಿದರು.

*********

ಮರುಪರೀಕ್ಷಾ ಸಿದ್ಧತೆಗಳ ಕುರಿತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅಧ್ಯಕ್ಷತೆಯಲ್ಲಿ ನಿನ್ನೆ ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಯಿತು.ಭಾನುವಾರ ನಡೆಯಲಿರುವ ನೀಟ್-ಯುಜಿ ಮರುಪರೀಕ್ಷೆಯ ಸಿದ್ಧತೆಗಳನ್ನು ನಿರ್ಣಯಿಸಲು ಉನ್ನತ ಮಟ್ಟದ ಸಭೆಯಲ್ಲಿ, ಪರೀಕ್ಷಾ ಪ್ರಕ್ರಿಯೆಯಲ್ಲಿ ಸಮಗ್ರತೆ, ಪಾರದರ್ಶಕತೆ ಮತ್ತು ದಕ್ಷತೆಯ ಅತ್ಯುನ್ನತ ಗುಣಮಟ್ಟವನ್ನು ಕಾಯ್ದುಕೊಳ್ಳುವ ಅಗತ್ಯವನ್ನು ಸಚಿವರು ಹೇಳಿದರು.  ಮರುಪರೀಕ್ಷೆಯನ್ನು ಮುಕ್ತ ಮತ್ತು ನ್ಯಾಯಯುತವಾಗಿ ನಡೆಸಲು ಅಗತ್ಯವಿರುವ ಎಲ್ಲಾ ವ್ಯವಸ್ಥೆಗಳನ್ನು ಖಚಿತಪಡಿಸಿಕೊಳ್ಳಲು ಮತ್ತು ಜಾಗರೂಕರಾಗಿರಲು ಅವರು ಎಲ್ಲಾ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಭೆಯಲ್ಲಿ, ಅಭ್ಯರ್ಥಿಗಳು ಒತ್ತಡರಹಿತ ವಾತಾವರಣದಲ್ಲಿ ಪರೀಕ್ಷೆಗೆ ಹಾಜರಾಗಲು ಅನುವು ಮಾಡಿಕೊಡಲು ಸರಿಯಾದ ಆಸನ ವ್ಯವಸ್ಥೆ ಮತ್ತು ಕುಡಿಯುವ ನೀರು ಸೇರಿದಂತೆ ಎಲ್ಲಾ ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿದೆಯೆ ಎಂದು ಖಚಿತಪಡಿಸಿಕೊಳ್ಳಲು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸೂಚಿಸಲಾಯಿತು.  ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು, ಕೇಂದ್ರ ಅನುದಾನಿತ ಸಂಸ್ಥೆಗಳು ಮತ್ತು ಉನ್ನತ ಶಿಕ್ಷಣ ಸಂಸ್ಥೆಗಳ ಪ್ರತಿನಿಧಿಗಳು ಮರು ಪರೀಕ್ಷೆಯನ್ನು ಸುಗಮ ಮತ್ತು ಪಾರದರ್ಶಕವಾಗಿ ನಡೆಸಲು ಸಂಪೂರ್ಣ ಸಹಕಾರವನ್ನು ಭರವಸೆ ನೀಡಿದರು.

*********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪಶ್ಚಿಮಬಂಗಾಳದ ಹೂಗ್ಲಿ ಜಿಲ್ಲೆಯ ತಾರಕೇಶ್ವರದಲ್ಲಿ ನಾಳೆ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯ ೨೩ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ. ದೇಶಾದ್ಯಂತ ೯.೪೪ ಕೋಟಿಗೂ ಹೆಚ್ಚು ರೈತರ ಬ್ಯಾಂಕ್ ಖಾತೆಗಳಿಗೆ ೧೮ ಸಾವಿರ ೮೮೦ ಕೋಟಿ ರೂಪಾಯಿಗಳನ್ನು ನೇರವಾಗಿ ವರ್ಗಾಯಿಸಲಾಗುವುದು. ೨.೧೮ ಕೋಟಿಗೂ ಹೆಚ್ಚು ಮಹಿಳಾ ರೈತರು ಸಹ ಈ ಕಂತಿನ ಪ್ರಯೋಜನ ಪಡೆಯುತ್ತಾರೆ.  ಈ ಬಿಡುಗಡೆಯೊಂದಿಗೆ, ೨೦೧೯ರ ಫೆಬ್ರವರಿಯಿಂದ ಪ್ರಾರಂಭವಾದಾಗಿನಿಂದ ಪಿಎಂ-ಕಿಸಾನ್ ಯೋಜನೆಯಡಿಯಲ್ಲಿ ಒಟ್ಟು ವಿತರಣೆ ೪.೪೭ ಲಕ್ಷ ಕೋಟಿ ರೂಪಾಯಿಗಳನ್ನು ಮೀರುತ್ತದೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯ ತಿಳಿಸಿದೆ.

*********

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ನಾಲ್ಕು ರಾಜ್ಯಗಳಿಗೆ ಕನಿಷ್ಠ ಬೆಂಬಲ ಬೆಲೆಯಲ್ಲಿ ದ್ವಿದಳ ಧಾನ್ಯಗಳು ಮತ್ತು ಎಣ್ಣೆಬೀಜಗಳ ಬೃಹತ್ ಪ್ರಮಾಣದ ಖರೀದಿಗೆ ಅನುಮೋದನೆ ನೀಡಿದ್ದಾರೆ. ತಮಿಳುನಾಡು, ಗುಜರಾತ್, ಉತ್ತರ ಪ್ರದೇಶ ಮತ್ತು ಹರಿಯಾಣದಲ್ಲಿ ಬೆಲೆ ಬೆಂಬಲ ಯೋಜನೆಯಡಿಯಲ್ಲಿ ಖರೀದಿಯನ್ನು ಕೈಗೊಳ್ಳಲಾಗುವುದು ಎಂದು ಸಚಿವಾಲಯ ತಿಳಿಸಿದೆ. ೨೦೨೬ರ ಬೇಸಿಗೆ ಋತುವಿನ ಅನುಮೋದನೆಗಳ ಅಡಿಯಲ್ಲಿ ಉತ್ತರ ಪ್ರದೇಶವು ಅತಿದೊಡ್ಡ ಫಲಾನುಭವಿಯಾಗಿ ಹೊರಹೊಮ್ಮಿದೆ. ಗುಜರಾತ್‌ನಲ್ಲಿ, ೨೦೨೬ ರ ಬೇಸಿಗೆ ಋತುವಿನಲ್ಲಿ ೧೮ ಸಾವಿರದ ೨೫೦ ಮೆಟ್ರಿಕ್ ಟನ್ ಹೆಸರುಕಾಳಿನ ಖರೀದಿಗೆ ಅನುಮೋದನೆ ನೀಡಲಾಗಿದೆ. ೨೦೨೫-೨೬ರ ರಬಿ ಮಾರುಕಟ್ಟೆ ಋತುವಿನ ಅಡಿಯಲ್ಲಿ ತಮಿಳುನಾಡಿಗೆ ಹೆಸರುಕಾಳಿನ ಖರೀದಿ ಮಿತಿಯನ್ನು ೮೮೫ ಮೆಟ್ರಿಕ್ ಟನ್‌ಗಳಿಂದ ೯೯೦ ಮೆಟ್ರಿಕ್ ಟನ್‌ಗಳಿಗೆ ಹೆಚ್ಚಿಸಲು ಅನುಮೋದನೆ ನೀಡಲಾಗಿದೆ. ಹಾಗೆಯೇ ಹರಿಯಾಣಕ್ಕೂ ೨೦೨೬ರ ಬೇಸಿಗೆಯಲ್ಲಿ ಎರಡು ಸಾವಿರದ ೧೧೫ ಮೆಟ್ರಿಕ್ ಟನ್ ಹೆಸರುಕಾಳಿನ ಖರೀದಿಗೆ ಸಚಿವಾಲಯ ಅನುಮೋದನೆ ನೀಡಿದೆ.

*********

ನ್ಯೂಜಿಲೆಂಡ್‌ನಲ್ಲಿ ನಿನ್ನೆ ನಡೆದ ಎಫ್‌ಐಎಚ್ ವುಮೆನ್ಸ್ ನೇಷನ್ ಕಪ್ ಹಾಕಿಯಲ್ಲಿ, ಭಾರತ, ಉರುಗ್ವೆಯನ್ನು ೩-೨ ಅಂತರದಿಂದ ಸೋಲಿಸಿ, ಸತತ ಮೂರನೇ ಗೆಲುವು ದಾಖಲಿಸಿ, ಪೂಲ್ ಎ ಪಟ್ಟಿಯಲ್ಲಿ ಅಗ್ರಸ್ಥಾನ ಗಳಿಸಿದೆ. ಆರಂಭಿಕ ಗೋಲು ಬಿಟ್ಟುಕೊಟ್ಟ ನಂತರ, ದೀಪಿಕಾ ಎರಡು ಗೋಲು ಗಳಿಸಿದರು. ಜೊತೆಗೆ ದೀಪಿಕಾ ಸೊರೆಂಗ್ ಮತ್ತೊಂದು ಗೋಲು ಗಳಿಸುವ ಮೂಲಕ ಭಾರತವು ಬಲವಾದ ಪುನರಾಗಮನವನ್ನು ಕಂಡಿತು. ೧೩ನೇ ನಿಮಿಷದಲ್ಲಿ ಚಿಯಾರಾ ಅಪ್ಪೆನ್ನಿನೊ ಮೂಲಕ ಉರುಗ್ವೆ ಮುನ್ನಡೆ ಸಾಧಿಸಿತು, ಆದರೆ ೨೪ನೇ ನಿಮಿಷದಲ್ಲಿ ದೀಪಿಕಾ ಪೆನಾಲ್ಟಿ ಕಾರ್ನರ್ ಮೂಲಕ ಸಮಬಲ ಸಾಧಿಸಿದರು. ನಂತರ ಸೊರೆಂಗ್ ೪೩ ನೇ ನಿಮಿಷದಲ್ಲಿ ಫೀಲ್ಡ್ ಗೋಲ್ ಗಳಿಸಿ ಭಾರತವನ್ನು ಮುನ್ನಡೆಸಿದರು. ಉರುಗ್ವೆ ನಾಯಕಿ ಮ್ಯಾನುಯೆಲಾ ವಿಲಾರ್ ೫೫ ನೇ ನಿಮಿಷದಲ್ಲಿ ಸಮತೋಲನವನ್ನು ಪುನಃಸ್ಥಾಪಿಸಿದರು, ಆದರೆ ದೀಪಿಕಾ ಒಂದು ನಿಮಿಷದ ನಂತರ ಮತ್ತೆ ಗೋಲು ಗಳಿಸಿ ಭಾರತಕ್ಕೆ ಜಯ ತಂದುಕೊಟ್ಟರು. ಮೂರು ಪಂದ್ಯಗಳಲ್ಲಿ ಮೂರು

ಗೆಲುವುಗಳೊಂದಿಗೆ, ಭಾರತವು ಪೂಲ್ ಎ ನಲ್ಲಿ ಅಗ್ರಸ್ಥಾನ ಪಡೆದು ಸೆಮಿಫೈನಲ್‌ಗೆ ಪ್ರವೇಶಿಸಿತು. ನಾಳೆ ಭಾರತದ ವನಿತೆಯರ ತಂಡ ಚಿಲಿ ತಂಡವನ್ನು ಎದುರಿಸಲಿದೆ. ಭಾರತಕ್ಕಾಗಿ ೧೦೦ ಅಂತಾ ರಾಷ್ಟ್ರೀಯ ಪಂದ್ಯಗಳನ್ನು ಪೂರ್ಣಗೊಳಿಸಿದ ನೇಹಾಗೆ ಈ ಪಂದ್ಯವು ಮಹತ್ವದ ಮೈಲಿಗಲ್ಲನ್ನು ಸಹ ಗುರುತಿಸಿತು.

*********